691 (480) ಡಾ॥ ಮಹಾದೇವಪ್ಪ ಹೆಚ್ ಸಿ (ಟಿ ನರಸೀಪುರ) – ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಚೀಟಿಯಿಂದ ಗೊಂದಲ ಉಂಟಾಗಿರುವುದು ನಿಜವೇ ,

ಆ) ಪಡಿತರ ಚೀಟಿಯನ್ನು ಬಡತನ ರೇಖೆಗಿಂತ ಕೆಳಗಿರುವ ಜನಾಂಗದವರಿಗೆ ವಿತರಿಸದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಬಂದಿದ್ದಲ್ಲಿ, ಪಡಿತರ ಚೀಟಿ ವಿತರಣೆ ಗೊಂದಲವನ್ನು ಪರಿಹರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ, ಎಷ್ಟು ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಗೋವಿಂದ ಎಂ ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು)

ಅ) ಹೌದು

ಆ) ಹೌದು

ಇ) ಅನರ್ಹರು ಬಿಪಿಎಲ್ ಪಡಿತರ ಚೀಟಿ ಹೊಂದಿದ್ದು ಅರ್ಹರಿಗೆ ಬಿಪಿಎಲ್ ಪಡಿತರ ಚೀಟಿ ನೀಡಿರುವುದಿಲ್ಲವೆಂದು ದೂರುಗಳು ಬಂದ ಹಿನ್ನೆಲೆಯಲ್ಲಿ ಜನವರಿ 2005 ರಂದು ಮನೆ ಮನೆ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲಾಗಿದೆ ಈ ಸಮೀಕ್ಷೆಯಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಅರ್ಹತೆಗೆ ಅನುಗುಣವಾಗಿ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿರುತ್ತದೆ

ಈ) ತಾತ್ಕಾಲಿಕ ಪಡಿತರ ವಿತರಣೆಯಲ್ಲಿ ಉಂಟಾಗಿರುವ ಲೋಪದೋಷಗಳನ್ನು ಸರಿಪಡಿಸಲು ಅಹವಾಲು ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಈ ಕೇಂದ್ರಗಳಲ್ಲಿ ಸ್ವೀಕರಿಸಲಾದ ಅಹವಾಲುಗಳ ಪೂರ್ಣ ವಿಲೇವಾರಿಯ ನಂತರ ಅರ್ಹ ಕುಟುಂಬಗಳಿಗೆ ತಾತ್ಕಾಲಿಕ ಪಡಿತರ ಚೀಟಿಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ನಂತರ ಖಾಯಂ ಪಡಿತರ ಚೀಟಿಯನ್ನು ನೀಡಲಾಗುವುದು ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳನ್ನು ಪೂರೈಸಲು ಕನಿಷ್ಠ 6 ತಿಂಗಳ ಕಾಲಾವಕಾಶ ಬೇಕಿರುತ್ತದೆ